# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/212/ಗ್ರಾಪಂಕಾ/2017 ದಿನಾಂಕ:28.3.2017.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE/554/2017/ARE-4 Date:23.03.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/ 554/2017/ARE-4 Date:27.03.2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/212/ಗ್ರಾಪಂಕಾ/2017 ದಿನಾಂಕ:11.04.2018.
5. ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 05.05.2018.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-4 ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"ಆಪಾದಿತ ಸರ್ಕಾರಿ ನೌಕರರಾದ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ರವರು ದೂರುದಾರ ಶ್ರೀ. ಹೆಚ್. ಎಸ್ ಶಂಕರಲಿಂಗಯ್ಯ, ರವರು ದಿನಾಂಕ:24.05.2015 ರಂದು ಹೊಸಹಳ್ಳಿ ಗ್ರಾಮ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆಯ ಖಾನೇಷುಮಾರಿ ನಂ.86/88 ನ್ನು ಪೌತಿ ವಾರಸುದಾರ ಆಧಾರದ ಮೇಲೆ ಖಾತೆ ಮಾಡಿ ಕೊಡಲು ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಿದ್ದರೂ ಸಹ ಅನಾವಶ್ಯಕವಾಗಿ ಮುಂದೂಡುತ್ತಾ ಮತ್ತು ದಾಖಲೆಗಳನ್ನು ಪರಿಶೀಲಿಸಿ ಕಾನೂನು ಕ್ರಮ ಕೈಗೊಳ್ಳದೇ ದಿನಾಂಕ:08.11.2013 ರಂದು ಸೂಕ್ತ ದಾಖಲೆ ನೀಡಿಲ್ಲ ಎಂದು ಹಿಂಬರಹ ನೀಡಿರುತ್ತಾರೆ ಮತ್ತು ಆ ನಂತರದಲ್ಲಿ ಪಿರ್ಯಾದುದಾರ ದಿನಾಂಕ:29.01.2014 ಇನ್ನೂ ಹೆಚ್ಚಿನ ದಾಖಲೆಗಳನ್ನು ಸಲ್ಲಿಸಿ ಪೌತಿ ವಾರಸುದಾರ ಖಾತೆ ಮಾಡಿಕೊಡಲು ಕೋರಿದ್ದರೂ ಸಹ ಅವುಗಳನ್ನು ಪರಿಶೀಲಿಸದೇ ಕಾನೂನು ಕ್ರಮ ಕೈಗೊಳ್ಳದೇ ಕರ್ತವ್ಯಲೋಪವೆಸಗಿರುತ್ತಾರೆ. ಸರ್ಕಾರಿ ಸೇವಕರಾಗಿದ್ದು, ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ, ಸಾರ್ವಜನಿಕ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಕರ್ನಾಟಕ ಸರ್ಕಾರಿ ಸೇವಾ(ಸದ್ವರ್ತನೆ) ನಿಯಮಾವಳಿ 1966 ರ 3(i) ರಿಂದ (iii) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದು, ಈ ವಿಚಾರಣಾ ಪ್ರಾಧಿಕಾರದ ಮುಂದೆ ವಿಚಾರಣೆಗೊಳಪಡಿಸಲು ಈ ದೋಷರೋಪಣೆ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ರಂಗಾಪುರ ಗ್ರಾಮ ಪಂಚಾಯಿತಿಯಲ್ಲಿ ಹೊಸಹಳ್ಳಿ ಗ್ರಾಮದ ಖಾನೇಷುಮಾರಿ ನಂ.86/88 ರ ಸ್ವತ್ತನ್ನು ಶ್ರೀ ಹೆಚ್.ಎಸ್ ಶಂಕರಲಿಂಗಯ್ಯ ರವರ ಹೆಸರಿಗೆ ಪೌತಿ ವಾರಸು ಖಾತೆ ಮಾಡಿಕೊಡುವ ಬಗ್ಗೆ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಆಪಾದಿತರು ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಸದರಿಯವರ ನಿವೃತ್ತಿ ವೇತನದಲ್ಲಿ ಶೇ.5% ರ ನಿವೃತ್ತಿ ವೇತನವನ್ನು 5 ವರ್ಷಗಳವರೆಗೆ ಕಡಿತಗೊಳಿಸುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ, ಎರಡನೇ ಕಾರಣ ಕೇಳುವ ನೋಟೀಸ್ಸಿಗೆ, ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು ಈ ಕೆಳಕಂಡಂತೆ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ.

ಶ್ರೀ ಹೆಚ್.ಎಸ್ ಶಂಕರಲಿಂಗಯ್ಯರವರು ಅನುಬಂಧ 1 ರಂತೆ ಆಪಾದಿಸಿರುವ ಅಂಶದಲ್ಲಿ ತುಮಕೂರು ಜಿಲ್ಲೆ ತಿಪಟೂರು ತಾಲ್ಲೂಕು, ಹೊಸಹಳ್ಳಿ ಗ್ರಾಮದ ಖಾತೆ ನಂ.86/88 ಕ್ಕೆ ಸಂಬಂಧಪಟ್ಟಂತೆ ಖಾತೆ ಬದಲಾವಣೆ ಮಾಡಿಕೊಡಲು ಅರ್ಜಿ ಸಲ್ಲಿಸಿದ್ದು ಸತ್ಯವಾಗಿದ್ದು ಇಲಾಖೆ ಅಗತ್ಯಕ್ರಮ ಕೈಗೊಳ್ಳುವಷ್ಟು ಪೂರ್ಣದಾಖಲೆಗಳನ್ನು ಸಲ್ಲಿಸದೇ ಇದ್ದು, ಸ್ಥಳ ತನಿಖೆ ಮಾಡಿದಾಗ ದೂರುದಾರರು ಸ್ವತ್ತಿನ ಸ್ವಾದೀನದಲ್ಲಿಲ್ಲದಿರುವುದು ಸ್ಪಷ್ಟವಾಗಿ ಕಂಡುಬಂದಿದ್ದು ಗ್ರಾಮಸ್ಥರಲ್ಲಿ ವಿಚಾರಣೆ ಮಾಡಿದಾಗ ಸಮರ್ಪಕವಾದ ಹೇಳಿಕೆ ದೊರೆಯದೆ ಅನುಮಾನಾಸ್ಪದವಾಗಿ ಕಂಡುಬಂದ ಕಾರಣ ಸೂಕ್ತ ದಾಖಲಾತಿಗಳನ್ನು ಒದಗಿಸಿಕೊಂಡು ಸಲಿಸುವಂತೆ ತಿಳುವಳಿಕೆ ನೀಡಿ ಹಿಂಬರಹ ನೀಡಿದ್ದು ಖಾತಾ ಬದಲಾವಣೆ ಅರ್ಜಿಯನ್ನು ವಿಲೆ ಪಡಿಸಿರುತ್ತೆ ವಿನಃ ಕರ್ನಾಟಕ ಸರ್ಕಾರಿ ಸೇವಾ (ವರ್ತನೆ) ನಿಯಮಾವಳಿ 1966 ರ 3(i) ರಿಂದ (iii) ನೇ ನಿಬಂಧನೆಯನ್ನು ಉಲ್ಲಂಘಿಸಿರುವುದಿಲ್ಲ ಮತ್ತು ವೈಯಕ್ತಿಕ ಆಸಕ್ತಿಯೂ ಇರುವುದಿಲ್ಲ ಖಾತೆ ಬದಲಾವಣೆ ಮಾಡಲಿಲ್ಲವೆಂದು ದುರುದ್ದೇಶದಿಂದ ಸಲ್ಲಿಸಿರುವ ದೂರಾಗಿರುತ್ತದೆ. ಮತ್ತೆ ಮುಂದುವರಿದ ಪರಿಶೀಲನೆ ನಡೆಸಿದಾಗ ಖಾತೆ ಬದಲಾವಣೆಗೆ ಸಲ್ಲಿಸಿದ ಸ್ವತ್ತಿನ ಸ್ಥಳದಲ್ಲಿ ಸಾರ್ವಜನಿಕರ ಕುಡಿಯುವ ನೀರಿನ ಟ್ಯಾಂಕ್ ಇದ್ದು ಅಳತೆ ತಾಳೆಯಾಗಿರುವುದಿಲ್ಲ ಇದು ಸತ್ಯಸಂಗತಿಯಾಗಿರುತ್ತದೆ.

ಅನುಬಂಧ 4 ರ ರೀತ್ಯ ದೂರುದಾರರು ಸಲ್ಲಿಸಿರುವ ದೂರು ಕಾನೂನು ಬಾಹಿರವಾಗಿದ್ದು ಅಗತ್ಯ ದಾಖಲಾತಿಗಳನ್ನು ಸಲ್ಲಿಸದೇ ಕಿರುಕುಳ ಕೊಡುವ ಉದ್ದೇಶದಿಂದ ಭ್ರಷ್ಟಾಚಾರದ ಆರೋಪ ಮಾಡಲಾಗಿದೆ. ಇದು ಸೃಷ್ಟಿಸಿಕೊಂಡ ಶುದ್ಧ ಸುಳ್ಳು ಸಂಗತಿಯಾಗಿರುತ್ತದೆ. ಅಲ್ಲದೆ ಸದರಿ ಸ್ವತ್ತಿಗೆ ಸಂಬಂಧಪಟ್ಟ ದಾಖಲಾತಿಗಳು ಖಾತೆದಾರರ ಪತ್ರಗಳಲ್ಲಿ ಕಂಡು ಬಂದಿರುವುದಿಲ್ಲ ಆದರೂ ನಿಖರವಾದ ಮಾಹಿತಿಕೊಟ್ಟು ನಿಖರ ದಾಖಲಾತಿಗಳನ್ನು ಸಲ್ಲಿಸಲು ಹೇಳಿದಾಗ್ಯೂ ರಾಜಕೀಯ ಹಿನ್ನೆಲೆಯುಳ್ಳ ದೂರುದಾರರು ಸ್ವಪ್ರತಿಷ್ಠೆಯ ಉದ್ದೇಶ ಸಾಧನೆಗಾಗಿ ದೂರು ದಾಖಲು ಮಾಡಿರುತ್ತಾರೆ. ಕರ್ತವ್ಯಲೋಪವೆಸಗುವ ಯಾವುದೇ ಪ್ರಮೇಯ ಕಂಡುಬಂದಿಲ್ಲ ಪೌತಿ ಖಾತೆ ಮಾಡದೆ ನಿರ್ಲಕ್ಷ್ಯ ಮಾಡಿರುತ್ತಾರೆಂಬ ದೂರುದಾರರ ದೂರು ಸತ್ಯಕ್ಕೆ ದೂರವಾಗಿದ್ದು ಮತ್ತು ದೂರಿನಲ್ಲಿ ಹೇಳಿರುವಂತೆ ದುರ್ವರ್ತನೆ, ದುರ್ನಡತೆಯಿಂದ ನಡೆದುಕೊಂಡಿರುವುದಿಲ್ಲ ದುರುದ್ದೇಶದಿಂದ ದೂರು ಸಲ್ಲಿಸಿರುತ್ತಾರೆ.

ದೂರುದಾರರು ಸೃಷ್ಟಿಸಿರುವ ದೂರಿನ ವಿರುದ್ಧ ಗೌರವಾನ್ವಿತ ಅಪರ ನಿಬಂಧಕರು ವಿಚಾರಣೆಗಳು-4 ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ವಿಚಾರಣೆ ನಡೆಸಿದ್ದು ದೂರುದಾರರು ಗೌರವಾನ್ವಿತ ನ್ಯಾಯಾಲಯದಲ್ಲಿ ತಮ್ಮ ಹೇಳಿಕೆಯನ್ನು ಸಲ್ಲಿಸಿಕೊಂಡಿರುತ್ತಾರೆ. ನಾನು ದಿನಾಂಕ:17.09.2016 ರಂದು ತಿಪಟೂರು ತಾಲ್ಲೂಕು ರಂಗಾಪುರ ಗ್ರಾಮ ಪಂಚಾಯಿತಿಯಿಂದ ವರ್ಗಾವಣೆಗೊಂಡು ಚಿಕ್ಕನಾಯಕನಹಳ್ಳಿ ತಾಲ್ಲೂಕು ಮಲ್ಲಿಗೆರೆ ಗ್ರಾಮ ಪಂಚಾಯಿತಿಗೆ ದಿನಾಂಕ:19.09.2016 ರಂದು ಕರ್ತವ್ಯಕ್ಕೆ ಹಾಜರಾಗಿ ವರದಿ

ಮಾಡಿಕೊಂಡ ನಂತರ ಘನ ಗೌರವಾನ್ವಿತ ಲೋಕಾಯುಕ್ತ ನ್ಯಾಯಾಲಯಕ್ಕೆ ದೂರು ದಾಖಲು ಮಾಡಿರುತ್ತಾರೆ, ಅಲ್ಲದೆ ತಿಪಟೂರು ತಾ, ರಂಗಾಪುರ ಗ್ರಾಮ ಪಂಚಾಯಿತಿಯಲ್ಲಿ ಪುನಃ ಅರ್ಜಿಸಲ್ಲಿಸಿಕೊಂಡು ವಿಲೆ ಇಟ್ಟಿದ್ದ ಅರ್ಜಿಯ ಮೇಲೆ ದೂರುದಾರರಾದ ಹೆಚ್.ಎಸ್ ಶಂಕರಲಿಂಗಯ್ಯ ಬಿನ್ ಸಿದ್ದಪ್ಪರವರ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಂಡಿರುತ್ತಾರೆ ಸದರಿ ವಿಷಯವನ್ನು ತಮ್ಮಲ್ಲಿ ನಿವೇದಿಸಿಕೊಂಡಿರುತ್ತೇನೆ. ಆದ್ದರಿಂದ ಧರ್ಮಪರತೆ ಮತ್ತು ನ್ಯಾಯದಾನದ ದೃಷ್ಟಿಯಿಂದ ದೂರುದಾರರು ಸಲ್ಲಿಸಿದ ದೂರು ಕಾನೂನು ಬಾಹಿರವಾಗಿದ್ದು ದೂರುದಾರರ ದೂರನ್ನು ವಜಾಗೊಳಿಸಿ ಕಾನೂನು ಪ್ರಕಾರ ಉಚಿತವೆನಿಸುವ ಅಗತ್ಯ ಕ್ರಮ ಕೈಗೊಂಡು ನ್ಯಾಯ ದೊರಕಿಸಿಕೊಡಬೇಕೆಂದು ತಮ್ಮಲ್ಲಿ ಪ್ರಾರ್ಥಿಸುತ್ತೇನೆಂದು ತಮ್ಮ ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಮಜಾಯಿಷಿಯನ್ನು ನೀಡಿರುತ್ತಾರೆ.

ಆಪಾದಿತ ನೌಕರರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಆದರೆ ಸದರಿಯವರ ಸಮಜಾಯಿಷಿಯನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

To the complaint lodged by the complainant, comments were called from the DGO and he has sent his comments along with two photographs and they are at Ex.P4 in the same it is stated that, PW1 had not produced suitable documents for change of Khatha and hence he has issued the endorsement dated:25.6.2013 but to that effect he has not produced the copy of the endorsement dated:8.7.213 PW1 gave another application for change of Khatha, but one Sri N. Nagaraju s\o Sri Nanjundashetty gave objections to the Panchayath for change Khatha and in the property in respect of which change of Khatha and in the property in respect of which change of Khatha was sought Panchayath has put up a public drinking water cistern and on 8.11.2013 he documents for which Pwl has issued the notice through his avocate. In the same it is further stated that, as there is a produced the Khatha has not been changed. It is pertinent to note that, as per Ex.P4 the own brother of DGO has objected for change of Khatha sought by PW1. In the Photographs produced along with Ex.P.4 drinking water cistern is seen. But on that ground only the DGO cannot reject the application of PW1.

Ex.P5 is the replay given by the complainant to the comments of the DGO. In the same he has stated about the case filed by the grand-father of the DGO against his grand –father and that it has been dismissed long back and the property in respect of which change of the Khatha was sought is his ancestral property and the Panchayath has put up the drinking water cistern without his Knowledge.

The evidence of PW 1 has remained unchallenged and the DGO has not passed any orders either rejecting or allowing the application of the complainant. His contention that, the complainant has not produced the proper documents for change of Khatha without specifying what are the proper documents to be produced cannot be accepted It is pertinent tonote that, according to the case of the complainant after notice of the DGO dated:08.11.2013 he has produced additional documents but there is no order by the DGO on his application. The DGO has also not produced any documents to show that, he has passed any orders on the application of the complainant for change of Khatha after 08.11.213 Ex.P4 cannot be considered as the order passed by the DGO in respect of the application of the complainant. The contention of the DGO that, his own brother who is working as the application of the DGO clearly shows that, the DGO has dragged the matter unnecessarily without passing any orders on the above said application of PW1 and thereby he has committed derelication of his duties.

Thus the DGO has failed to maintain absolute integrity, devotion to duty and acted in a manner of unbecoming of a Government Servant. Hence, I answer this point in the Affirmative.

Point No.2:- For the reasons discussed above, I proceed to pass the following.

ಸದರಿಯವರುಗಳು ಸರ್ಕಾರಕ್ಕೆ ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲವಾಗಿರುತ್ತದೆ. ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಆಪಾದಿತರು ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಸದರಿಯವರ ನಿವೃತ್ತಿ ವೇತನದಲ್ಲಿ ಶೇ.5% ರ ನಿವೃತ್ತಿ ವೇತನವನ್ನು 5 ವರ್ಷಗಳವರೆಗೆ ಕಡಿತಗೊಳಿಸುವ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:212:ಗ್ರಾಪಂಕಾ2017 ಬೆಂಗಳೂರು, ದಿನಾಂಕ-05-07-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ರವರುಗಳು ರಂಗಾಪುರ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ಹೊಸಹಳ್ಳಿ ಗ್ರಾಮ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆಯ ಖಾನೇಷುಮಾರಿ ನಂ.86/88 ನ್ನು ಪೌತಿ ವಾರಸುದಾರ ಆಧಾರದ ಮೇಲೆ ಖಾತೆ ಮಾಡಿ ಕೊಡಲು ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಿದ್ದರೂ ಸಹ ಅನಾವಶ್ಯಕವಾಗಿ ಮುಂದೂಡುತ್ತಾ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ರವರು ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಸದರಿಯವರ ನಿವೃತ್ತಿ ವೇತನದಲ್ಲಿ ಶೇ.5% ರ ನಿವೃತ್ತಿ ವೇತನವನ್ನು 5 ವರ್ಷಗಳವರೆಗೆ ಕಡಿತಗೊಳಿಸುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

9/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ,
6. ಶ್ರೀ ಗಂಗಾಧರ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.